**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೆಗ್ಗಡದೇವನಕೋಟೆ, ಮೈಸೂರು ಜಿಲ್ಲೆ.**

**O.S. No. 387/2023**

| | | |
|---|---|---|
| ಸಾಕ್ಷಿದಾರರ ಹೆಸರು | : | ಶಿವಮ್ಮ |
| ಗಂಡನ ಹೆಸರು | : | ಚಂದ್ರೇಗೌಡ |
| ವಯಸ್ಸು | : | 37 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸಸ್ಥಳ | : | ಹೆಚ್.ಡಿ. ಕೋಟೆ ಟೌನ್. |

**ಸಾಕ್ಷಿಯನ್ನು ದಿನಾಂಕಃ 04.06.2024 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿಗಳ ಪರ ಶ್ರೀ. ಸಿ.ಪಿ. ವಕೀಲರಿಂದಃ**

ನಾನು ಈ ಪ್ರಕರಣದಲ್ಲಿ 2 ನೇ ವಾದಿಯಾಗಿದ್ದು, ನನ್ನ ಮುಖ್ಯ ವಿಚಾರಣೆ ಬಾಬ್ತು ನನ್ನ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿಗಳು ನನ್ನದೇ ಆಗಿರುತ್ತವೆ.

ಸ.ನಂ. 81/3 ಮತ್ತು ಸ.ನಂ. 63/1 ಕ್ಕೆ ಸಂಬಂಧಿಸಿದ ಕೈ-ಬರವಣಿಗೆಯ ಪಹಣಿ ಪತ್ರಿಕೆಗಳ 02 ಧೃಡೀಕೃತ ಪ್ರತಿಗಳನ್ನು ಹಾಜರುಪಡಿಸಿದ್ದೇನೆ. ಅವುಗಳನ್ನು ಕ್ರಮವಾಗಿ ನಿ.ಪಿ.-1 ಮತ್ತು ನಿ.ಪಿ.-2 ಎಂದು ಗುರುತಿಸಲಾಯಿತು.

ಸ.ನಂ. 81/3 ರ 02 ಪುಟಗಳುಳ್ಳ ಪಹಣಿ ಪತ್ರಿಕೆ ಮತ್ತು ಸ.ನಂ. 63/1ರ 02 ಗಣಕೀಕೃತ ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದೇನೆ. ಅವುಗಳನ್ನು ಕ್ರಮವಾಗಿ ನಿ.ಪಿ.-3 ರಿಂದ ನಿ.ಪಿ.-5 ಎಂದು ಗುರುತಿಸಲಾಯಿತು.

02 ಪುಟಗಳುಳ್ಳ ಮ್ಯುಟೇಷನ್ ರಿಜಿಸ್ಟರ್ ಪ್ರತಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ.-6 ಎಂದು ಗುರುತಿಸಲಾಯಿತು.

ಕರ್ನಾಟಕ ಮುದ್ರಾಂಕ ಅಧಿನಿಯಮದಡಿ ಉಪ-ನೋಂದಣಾಧಿಕಾರಿಗಳ ಡಿಜಿಟಲ್ ಸಹಿಯನ್ನೊಳಗೊಂಡ ದಿನಾಂಕಃ 26.05.2022ರ ನೋಂದಾಯಿತ ದಾನ ಪತ್ರದ ಪ್ರತಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ.-7 ಎಂದು ಗುರುತಿಸಲಾಯಿತು.

ಹಂಚೀಪುರ ಗ್ರಾಮ ಪಂಚಾಯಿತಿಯವರು ನೀಡಿರುವ 02 ಡಿಮ್ಯಾಂಡ್ ರಿಜಿಸ್ಟರ್ ಇಕ್ಸಟ್ರಾಕ್ಟ್ ನ ಪ್ರತಿಗಳನ್ನು ಹಾಜರುಪಡಿಸಿದ್ದೇನೆ. ಅವುಗಳನ್ನು ಕ್ರಮವಾಗಿ ನಿ.ಪಿ.-8 ಮತ್ತು ನಿ.ಪಿ.-9 ಎಂದು ಗುರುತಿಸಲಾಯಿತು.

ನಮ್ಮ ವಕೀಲರ ಮೂಲಕ ಪ್ರತಿವಾದಿಗಳಿಗೆ ನೀಡಿದ ನೋಟೀಸ್ ನ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ.-10 ಎಂದು ಗುರುತಿಸಲಾಯಿತು.

03 ಅಂಚೆ ರಸೀದಿಗಳನ್ನು ಹಾಜರುಪಡಿಸಿದ್ದೇನೆ. ಅವುಗಳನ್ನು ಕ್ರಮವಾಗಿ ನಿ.ಪಿ.-11 ರಿಂದ ನಿ.ಪಿ.-13 ಎಂದು ಗುರುತಿಸಲಾಯಿತು.

03 ಅಂಚೆ ಸ್ವೀಕೃತಿ ಪತ್ರಗಳನ್ನು ಹಾಜರುಪಡಿಸಿದ್ದೇನೆ. ಅವುಗಳನ್ನು ಕ್ರಮವಾಗಿ ನಿ.ಪಿ.-14 ರಿಂದ ನಿ.ಪಿ.-16 ಎಂದು ಗುರುತಿಸಲಾಯಿತು.

**ಈ ಹಂತದಲ್ಲಿ ಮಾನ್ಯ ವಾದಿಗಳ ಪರ ವಕೀಲರು ಮುಂದಿನ ಮುಖ್ಯ ವಿಚಾರಣೆಗಾಗಿ ಸಮಯ ಕೋರಿರುತ್ತಾರೆ. ಸಮಯ ನೀಡಲಾಯಿತು.**

(**ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**)

**ಓ ಹೇ ಕೇ ಸಾ ಸ ಇ ಒ.,**

**ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**

**ಹೆಗ್ಗಡದೇವನಕೋಟೆ.**